ಸಮಾಚಾರ ಸಣ್ಣದಲ್ಲ

ಚುನಾವಣೆಯ ನಂತರ ಗ್ಯಾರಂಟಿಗಳ ಅಂತ್ಯ

ಕಾಗವಾಡ: ಬರುವ ಲೋಕಸಭಾ ಚುನಾವಣೆ ಫಲಿತಾಂಶ ನಂತರ ರಾಜ್ಯ ಸರಕಾರ ಉಳಿಯುವ ಗ್ಯಾರಂಟಿ ಇಲ್ಲದಿರುವಾಗ ಈಗ ನೀಡುತ್ತಿರುವ ಪಂಚ ಗ್ಯಾರಂಟಿಯ ವಾರಂಟಿ ಮುಗಿಯುತ್ತದೆ ಎಂದು ರಾಜ್ಯ ಸಭಾ ಸದಸ್ಯ ಈರಣ್ಣ ಕಡಾಡಿ ಕಾಂಗ್ರೆಸ್ ವಿರುದ್ಧ ವ್ಯಂಗ್ಯವಾಡಿದರು.ತಾಲೂಕಿನ ಶಿರಗುಪ್ಪಿ ಗ್ರಾಮದಲ್ಲಿ ಬಿಜೆಪಿ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿ, ಸ್ಥಳೀಯ ಕಾಂಗ್ರೆಸ್ ಶಾಸಕರೆ ನಮಗೆ ಅನುದಾನ ಸಿಗುತ್ತಿಲ್ಲಾ ಎಂದು ತಮ್ಮದೇ ಸರಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇದೇ ರೀತಿ ರಾಜ್ಯದ ಹಲವು ಕಾಂಗ್ರೆಸ್ ಶಾಸಕರು ತಮ್ಮ ಅನುದಾನ ಸಿಗುತ್ತಿಲ್ಲಾ ಎಂದು ಅಸಮಾಧಾನರಾಗಿದ್ದಾರೆ. ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಮಾಡಿ ಎನ್ನುವ ಜನರಿಗೆ ಉತ್ತರ ನೀಡಲಾಗದ ಪರಿಸ್ಥಿತಿ ರಾಜ್ಯದ ಕಾಂಗ್ರೆಸ್ ಶಾಸಕರದ್ದಾಗಿದೆ ಇದರಲ್ಲಿ ತಿಳಿಯುತ್ತದೆ. ಹೀಗಾಗಿ ಈ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆ ಅವರಿಗೆ ಮತ ನೀಡಿ ಮತ್ತೊಮ್ಮೆ ಮೋದಿಯವರ ಕೈ ಬಲಪಡಿಸಬೇಕು ಎಂದರು.

ಪ್ರಜ್ವಲ್ ರೇವಣ್ಣ ನಾಲಾಯಕ್ ಸಂಸದ

ಬೀದರ್: ವಿಕೃತಕಾಮಿ ಉಮೇಶ್ ರೆಡ್ಡಿಗಿಂತ ಹತ್ತು ಪಟ್ಟು ಹೆಚ್ಚು ವಿಕೃತಕಾಮಿ ಸಂಸದ ಪ್ರಜ್ವಲ್ ರೇವಣ್ಣ ಎಂದು ಕಾಂಗ್ರೆಸ್ ಮಹಿಳಾ ಘಟಕದ ರಾಜ್ಯ ಅಧ್ಯಕ್ಷೆ ಪುಷ್ಪಾ ಅಮರನಾಥ್ ಆರೋಪಿಸಿದರು. ಪ್ರಜ್ವಲ್ ರೇವಣ್ಣ ಒಬ್ಬ ನಾಲಾಯಕ್ ಸಂಸದ. ನಿರ್ಭಯಾ ಅತ್ಯಾಚಾರ, ವಿಕೃತಕಾಮಿ ಉಮೇಶ್ ರೆಡ್ಡಿ ಪ್ರಕರಣದ ಮಾದರಿಯಲ್ಲಿ ಅವರಿಗೆ ಕಾನೂನಿನ ಪ್ರಕಾರ ಶಿಕ್ಷೆ ವಿಧಿಸಬೇಕು. ಭವಿಷ್ಯದಲ್ಲಿ ಈ ರೀತಿಯ ಘಟನೆಗಳು ಮರುಕಳಿಸಬಾರದು ಎಂದು ಆಗ್ರಹಿಸಿದರು. ತಾಯಿ ಸ್ಥಾನದಲ್ಲಿರುವ ಪ್ರಧಾನಿ ನರೇಂದ್ರ ಮೋದಿಯವರು ಸಂತ್ರಸ್ತ ಮಹಿಳೆಯರಿಗೆ ರಕ್ಷಣೆ ಕೊಡುತ್ತೇನೆ ಎಂದು ಹೇಳಬೇಕಿತ್ತು. ಆದರೆ, ಅವರು ಹಾಗೇ ಮಾಡಿಲ್ಲ. ಅವರು ವಿಶ್ವಗುರು ಅಂತ ಅವರನ್ನು ಕರೆದುಕೊಳ್ಳುತ್ತಾರೆ. ಆದರೆ, ಸಂತ್ರಸ್ತೆಯರ ಪರ ಮಾತನಾಡಿಲ್ಲ. ಅವರ ಜತೆ ನಾವಿದ್ದೇವೆ ಎಂದು ಬಿಜೆಪಿ ಮುಖಂಡರಾದರೂ ಹೇಳಬೇಕಿತ್ತು ಎಂದರು.

ಪ್ರಜ್ವಲ್ ಪ್ರಕರಣ ಸಿಬಿಐಗೆ ವಹಿಸಿ

ಹೊಸಪೇಟೆ: ಪ್ರಜ್ವಲ್ ರೇವಣ್ಣ ಭಾಗಿಯಾಗಿದ್ದಾರೆಂದು ಹೇಳಲಾಗಿರುವ ಲೈಂಗಿಕ ಹಗರಣದ ತನಿಖೆಯನ್ನು ಸಿಬಿಐಗೆ ವಹಿಸಬೇಕು, ಸಿಐಡಿ ತನಿಖೆಯಿಂದ ವಾಸ್ತವ ಅಂಶ ಹೊರಬರುವ ವಿಶ್ವಾಸ ಇಲ್ಲ ಎಂದು ಬಿಜೆಪಿ ಶಾಸಕ ಬೈರತಿ ಬಸವರಾಜ್ ಹೇಳಿದರು.ಸುದ್ದಿಗಾರರೊಂದಿಗೆ ಮಾತನಾಡಿ, ಸಿಐಡಿ ತನಿಖೆಯಿಂದ ವಾಸ್ತವ ಹೊರಬರಲಾರದು ಎಂದು ಎಚ್.ಡಿ.ಕುಮಾರಸ್ವಾಮಿ ಅವರು ಸಂಶಯ ವ್ಯಕ್ತಪಡಿಸಿದ್ದರಲ್ಲಿ ಅರ್ಥವಿದೆ. ಹೀಗಾಗಿ ಸಿಐಬಿ ತನಿಖೆ ನಡೆಸಿದರೆ ಮಾತ್ರ ವಾಸ್ತವ ಹೊರಬರಲಿದೆ ಎಂಬುದು ಬಿಜೆಪಿಯ ನಿಲುವೂ ಆಗಿದೆ. ಪ್ರಜ್ವಲ್ ಪ್ರಕರಣದಿಂದ ಚುನಾವಣೆಯ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ. ಉತ್ತರ ಕರ್ನಾಟಕ ಭಾಗದಲ್ಲಿ ಮತದಾರರು ಈಗಾಗಲೇ ಮೋದಿ ಅವರ ಕೈ ಬಲಪಡಿಸಲು ನಿರ್ಧರಿಸಿದ್ದಾರೆ. ಹೆಣ್ಣುಮಕ್ಕಳನ್ನು ಲೈಂಗಿಕ ದೌರ್ಜನ್ಯಕ್ಕೆ ಒಳಪಡಿಸಿದವರನ್ನು ರಕ್ಷಿಸುವ ಪ್ರಶ್ನೆಯೇ ಇಲ್ಲ. ಈಗಾಗಲೇ ಕೇಂದ್ರ ಗೃಹ ಸಚಿವರೇ ಈ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ ಎಂದು ಬೈರತಿ ಬಸವರಾಜ್ ಹೇಳಿದರು.

ಕುಮಾರಸ್ವಾಮಿ 2 ಲಕ್ಷ ಲೀಡ್‌ನಲ್ಲಿ ಗೆಲ್ಲುತ್ತಾರೆ

ಮಂಡ್ಯ: ಈ ಬಾರಿಯ ಚುನಾವಣೆಯಲ್ಲಿ ಎಚ್.ಡಿ. ಕುಮಾರಸ್ವಾಮಿ ಅವರು 2 ಲಕ್ಷ ಮತಗಳ ಅಂತರದಿಂದ ಗೆಲುವು ಸಾಧಿಸಲಿದ್ದಾರೆ ಎಂದು ಮಾಜಿ ಸಚಿವ ಸಿ. ಎಸ್. ಪುಟ್ಟರಾಜು ವಿಶ್ವಾಸ ವ್ಯಕ್ತಪಡಿಸಿದ್ದಾರೆ.ಸುದ್ದಿಗಾರರೊಂದಿಗೆ ಮಾತನಾಡಿ, ಮತದಾರರು ಸಂಪೂರ್ಣವಾಗಿ ಬೆಂಬಲ ಕೊಟ್ಟಿದ್ದಾರೆ. ಶೇಕಡಾ 95 ರಷ್ಟು ಬಿಜೆಪಿ ಪಕ್ಷದ ಕಾರ್ಯಕರ್ತರು ಶಕ್ತಿ ಮೀರಿ ಕೆಲಸ ಮಾಡಿದ್ದಾರೆ. ಜೆಡಿಎಸ್-ಬಿಜೆಪಿ ಕಾರ್ಯಕರ್ತರಿಗೆ ಅಭಿನಂದನೆ ಸಲ್ಲಿಸುತ್ತೇನೆ. ಕುಮಾರಣ್ಣ ಮಾಡಿದ್ದ ಜನಪ್ರಿಯ ಕಾರ್ಯಕ್ರಮಗಳನ್ನು ನೆನೆದು ಪಕ್ಷಾತೀತವಾಗಿ ವಿಶೇಷವಾಗಿ ಮಹಿಳೆಯರು ಆಶೀರ್ವಾದ ಮಾಡಿದ್ದಾರೆ ಎಂದು ತಿಳಿಸಿದರು.

ಜೋಶಿ ಪರ ಏಕನಾಥ ಶಿಂಧೆ ಪ್ರಚಾರ ಇಂದು

ಧಾರವಾಡ: ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ ಶಿಂಧೆ ಅವರು ಗುರುವಾರ ಏ.2 ರಂದು, ಸಂಜೆ 6 ಕ್ಕೆ ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ ಅವರ ಪರವಾಗಿ ಲೋಕಸಭಾ ಚುನಾವಣೆಯಲ್ಲಿ ಬಹಿರಂಗ ಸಭೆ ಮೂಲಕ ಮತಯಾಚಿಸಲು ಧಾರವಾಡ ಜಿಲ್ಲೆಗೆ ಆಗಮಿಸಲಿದ್ದಾರೆ. ಧಾರವಾಡ ನಗರದ ಹುರಕಡ್ಲಿ ಕಾನೂನು ಮಹಾವಿದ್ಯಾಲಯದ ಮೈದಾನದಲ್ಲಿ ಬಹಿರಂಗ ಪ್ರಚಾರ ಸಭೆ ಆಯೋಜಿಸಲಾಗಿದೆ.

2024ರ ಲೋಕಸಭೆ ಚುನಾವಣೆಯ ಕಲಬುರಗಿ ಮೀಸಲು ಮತಕ್ಷೇತ್ರದಲ್ಲಿ ಈ ಬಾರಿ ಉಮೇಶ್ ಜಾಧವ ವರ್ಷನ್ ಪ್ರಿಯಾಂಕ್ ಖರ್ಗೆ ಚುನಾವಣೆಯಾಗಿ, ಕಾಂಗ್ರೆಸ್ ಅಭ್ಯರ್ಥಿ ರಾಧಾಕೃಷ್ಣ ದೊಡಮನಿ ಹೆಸರಿಗಷ್ಟೇ ಅಭ್ಯರ್ಥಿಯಾಗಿದ್ದಾರೆ. ಎಲ್ಲವೂ ಸಚಿವ ಪ್ರಿಯಾಂಕ್ ಖರ್ಗೆ ಅವರೇ ಮಾಡುತ್ತಿದ್ದಾರೆ. ನನ್ನನ್ನು ಸೋಲಿಸಲೆಂದೇ ಕಾಂಗ್ರೆಸ್‌ನ ಎಐಸಿಸಿ ಅಧ್ಯಕ್ಷರು ಕರೆ ನೀಡಿದ್ದಾರೆ. ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ, ರಾಜ್ಯದ ಮಂತ್ರಿಗಳು, ಕರ್ನಾಟಕ ಉಸ್ತುವಾರಿ ಎಲ್ಲರೂ ಇಲ್ಲಿಯೇ ಬೀಡು ಬಿಟ್ಟಿದ್ದಾರೆ. ಆದರೆ, ಕಲಬುರಗಿಯ ಜನ ದೇಶದ ಸುಭದ್ರತೆ ಹಾಗೂ ಮೋದಿ ಅವರು ಮೂರನೇ ಬಾರಿ ಪ್ರಧಾನಿ ಆಗಬೇಕು ಎನ್ನುವ ಇಚ್ಛೆ ಹೊಂದಿದ್ದು, ಈ ಬಾರಿಯೂ ಮತ್ತೊಮ್ಮೆ ಬಿಜೆಪಿಗೆ ಮತ ಹಾಕುವ ಮೂಲಕ ಕಲಬುರಗಿಯಲ್ಲಿ ಕಮಲ ಬಾವುಟ ಹಾರಿಸುತ್ತೇವೆ. ನೂರಕ್ಕೆ ನೂರರಷ್ಟು ಗೆಲುವು ತಮ್ಮದೇ ಎನ್ನುವ ವಿಶ್ವಾಸವನ್ನು ಕಲಬುರಗಿ ಲೋಕಸಭಾ ಸದಸ್ಯ ಡಾ.ಉಮೇಶ್ ಜಾಧವ ಅವರು ವಿಶ್ವವಾಣಿಯೊಂದಿಗಿನ ವಿಶೇಷ ಸಂದರ್ಶನದಲ್ಲಿ ಮನದಾಳದ ಮಾತು ಹಂಚಿಕೊಂಡಿದ್ದಾರೆ.

ಇದು ನನ್ನ, ಪ್ರಿಯಾಂಕ್ ಖರ್ಗೆ ಚುನಾವಣೆ

ವಿಶ್ವವಾಣಿ ಸಂದರ್ಶನ
ದೇವೇಂದ್ರ ಜಾಡಿ

ಹೇಗಿದೆ ಈ ಬಾರಿ ಮತದಾರರ ಒಲವು?

ಕಲಬುರಗಿಯಿಂದ ಎರಡನೇ ಬಾರಿಗೆ ಸಂಸತ್ತಿಗೆ ಪ್ರವೇಶ ಪಡೆಯಲು ಎಲೆಕ್ಷನ್ ನಿಲ್ಲುತ್ತಿದ್ದೇನೆ. ಬಹಳಷ್ಟು ಉತ್ಸಾಹ ಕಾರ್ಯಕರ್ತರಲ್ಲಿ ಮೂಡಿದೆ. ಜಿಲ್ಲೆಯಲ್ಲಿ ಬಿಜೆಪಿ ಪರ ಉತ್ತಮ ವಾತಾವರಣ ನಿರ್ಮಾಣವಾಗಿದೆ. ಎಲ್ಲಾ ಕಡೆಗೆ ಜನ ಬೆಂಬಲ ಸೂಚಿಸುತ್ತಿದ್ದಾರೆ. ಹೀಗಾಗಿ ಈ ಬಾರಿಯೂ ಸಹ ಗೆಲ್ಲುವ ಪ್ರಬಲ ವಿಶ್ವಾಸವಿದೆ. 100ಕ್ಕೆ 100ರಷ್ಟು ಗೆದ್ದು ಬರುತ್ತೇನೆ.

ಚುನಾವಣೆ ಪ್ರಚಾರ ಹೇಗೆ ನಡೆಯುತ್ತಿದೆ, ಕಾರ್ಯಕರ್ತರಲ್ಲಿ ಹುಮ್ಮಸ್ಸು ಹೇಗಿದೆ?

ಜಿಲ್ಲೆಯಲ್ಲಿ ಚುನಾವಣಾ ಪ್ರಚಾರ ಬಹಳ ಚನ್ನಾಗಿ ನಡೆಯುತ್ತಿದೆ. ಮಾರ್ಚ್ 13ರಂದು ಅಭ್ಯರ್ಥಿ ಘೋಷಣೆ ಆದಾಗಿಂದ ಪ್ರಚಾರ ಆರಂಭಿಸಿದ್ದೇವೆ. ಮಾರ್ಚ್ 14ರಂದು ಪ್ರಧಾನಿ ಮೋದಿ ಅವರು ದೇಶದಲ್ಲಿಯೇ ಕಲಬುರಗಿಯಿಂದ 2024ರ ಲೋಕಸಭಾ ಚುನಾವಣಾ ಪ್ರಚಾರಕ್ಕೆ ಚಾಲನೆ ನೀಡಿದರು. ಅದು ಬಿಜೆಪಿ ಕಾರ್ಯಕರ್ತರಲ್ಲಿ ಹೊಸ ಹುಮ್ಮಸ್ಸು ಮೂಡಿದೆ. ಹುಮ್ಮಸ್ಸಿನಿಂದ ಮತ ಹಾಕಿಸಿ, ಹುಮ್ಮಸ್ಸಿಂದಲೇ ಗೆಲ್ಲಿಸಿಕೊಂಡು ಬರುತ್ತಾರೆ.

2019ರ ಚುನಾವಣೆಗೂ 2024ರ ಚುನಾವಣೆಗೂ ಏನು ವ್ಯತ್ಯಾಸ ಕಂಡು ಬರುತ್ತಿದೆ?

ಎಲ್ಲಾ ಎಲೆಕ್ಷನ್ ಗಳು ಭಿನ್ನಾವಾಗಿರುತ್ತವೆ. ಬೇರೆ ಬೇರೆ ವಿಚಾರಗಳ ಮೇಲೆ ಚುನಾವಣೆಗಳು ನಡೆಯುತ್ತವೆ. ಕಳೆದ ಎಲೆಕ್ಷನ್ ಮಲ್ಲಿಕಾರ್ಜುನ ಖರ್ಗೆ ಅವರು ಸ್ಪರ್ಧೆ ಮಾಡಿದರು. ಈ ಸಲ ಅವರ ಅಳಿಯ ಸ್ಪರ್ಧೆ ಮಾಡುತ್ತಿದ್ದಾರೆ. ಕಳೆದ ಬಾರಿಗಿಂತ ಈ ಬಾರಿ ಪ್ರಚಾರ ಅಬ್ಬರದಿಂದ ನಡೆದಿದೆ. 2019ರಲ್ಲಿಯೂ ಜಿದ್ದಾನಿಂದ ಚುನಾವಣೆ ನಡೆದಿತ್ತು. ಈ ಬಾರಿಯೂ ಅದೇ ಜಿದ್ದಿನಿಂದ ಕೂಡಿದೆ.

ರಾಜ್ಯ ಸರಕಾರದ ಗ್ಯಾರಂಟಿಗಳು ನಿಮ್ಮ ಗೆಲುವಿಗೆ ತಡೆ ಉಂಟುಮಾಡುತ್ತೆ ಅನಿಸುತ್ತೆ?

ಕಾಂಗ್ರೆಸ್ ಸರಕಾರದ ಗ್ಯಾರಂಟಿ ಯೋಜನೆಗಳಿಂದ ನನಗೆ ಏನು ಸಮಸ್ಯೆ ಆಗುವುದಿಲ್ಲ. ಗ್ಯಾರಂಟಿ ಯೋಜನೆಗಳು ಜನರಿಗೆ ತಲುಪುತ್ತಿಲ್ಲ. ರಾಜ್ಯ ಸರಕಾರ ನುಡಿದಂತೆ ನಡೆದಿಲ್ಲ. ಆದರಿಂದ ಗ್ಯಾರಂಟಿಗಳು ಬಿಜೆಪಿಗೆ ಯಾವುದೇ ಡ್ಯಾಮೇಜ್ ಮಾಡುವುದಿಲ್ಲ.

ಮಾಲೀಕಯ್ಯ ಗುತ್ತೇದಾರ್, ಬಾಬುರಾವ ಚಿಂಚನಸೂರ್ ಅವರು ಬಿಜೆಪಿ ತೊರೆದಿದ್ದಾರೆ ಇದಕ್ಕೆ ಏನು ಹೇಳುತ್ತೀರಿ?

ರಾಜಕಾರಣದಲ್ಲಿ ಒಬ್ಬರು ಒಂದು ಪಕ್ಷದಿಂದ ಮತ್ತೊಂದು ಪಕ್ಷಕ್ಕೆ ಸೇರುವುದು ಕಾಮನ್, ರಾಜಕೀಯ ಧೃವಿಕರಣ ಸಹಜವಾಗಿದೆ. ಇದರಿಂದಾಗಿ ಬಿಜೆಪಿಗೆ ಯಾವುದೇ ಪೆಟ್ಟು ಬೀಳುವುದಿಲ್ಲ. ಪ್ಲಸ್ಸು ಉಂಟು, ಮೈನಸ್ಸು ಉಂಟು. ಎಂಪಿ ಎಲೆಕ್ಷನ್ ಬೇರೆ, ಎಂಎಲ್ ಎಲೆಕ್ಷನ್ ಯೇ ಬೇರೆ, ಲೋಕಸಭೆ ಚುನಾವಣೆಯಲ್ಲಿ ಎಷ್ಟು ಜನ ಎಂಎಲ್ ಇದ್ದಾರೆ ಎನ್ನುವುದು ಕೌಂಟ ಆಗುವುದಿಲ್ಲ. ಎಂಪಿ ಎಲೆಕ್ಷನ್ ದೇಶದ ಚುನಾವಣೆ ಇರುವುದರಿಂದ ಶಾಸಕರು ಎಷ್ಟು ಎನ್ನುವುದು ವ್ಯತ್ಯಾಸ ಆಗುವುದಿಲ್ಲ.

ಸಚಿವ ಪ್ರಿಯಾಂಕ್ ಖರ್ಗೆ, ನಿಮ್ಮ ನಡುವಿನ ಪದಗಳ ಸಮರ ಚುನಾವಣೆಯಲ್ಲಿ ಯಾವ ರೀತಿಯಾಗಿ ಪರಿಣಾಮ ಬೀರುತ್ತದೆಯೇ?

ರಾಧಾಕೃಷ್ಣ ದೊಡ್ಡಮನಿ ಅವರು ಹೆಸರಿಗೆ ಅಷ್ಟೇ ಚುನಾವಣೆ ನೀತಿದ್ದಾರೆ. ಇದು ಎಲೆಕ್ಷನ್ ಪ್ರಿಯಾಂಕ್ ಖರ್ಗೆ ಹಾಗೂ ನನ್ನದು. ಕಳೆದ ಚುನಾವಣೆಯ ಸೋಲಿನ ಸೇಡು ತೀರಿಸಿಕೊಳ್ಳಲು ಮಲ್ಲಿಕಾರ್ಜುನ ಖರ್ಗೆ ಅವರು ಕರೆ ನೀಡಿದ್ದಾರೆ. ಕಾಂಗ್ರೆಸ್ ನಾಯಕರು ಇಲ್ಲೇ ಬಿಡು ಬಿಟ್ಟಿದ್ದಾರೆ. ಸೋಲಿನ ಭೀತಿ ಶುರುವಾಗಿದೆ. ಶತಯಗತಯ ಗೆಲ್ಲಬೇಕು ಎಂದು ಹೆಣಗಾಡುತ್ತಿದ್ದಾರೆ. ಅವರು ಏನೇ ಮಾಡಿದರು ಸಹ ಕಲಬುರಗಿಯಲ್ಲಿ 1.5 ರಿಂದ 2 ಲಕ್ಷ ಅಂತರದಿಂದ ಗೆಲ್ಲುತ್ತೇನೆ.

> ಪ್ರತಿ ಹಳ್ಳಿ ಹಳ್ಳಿಯಲ್ಲೂ ಚುನಾವಣೆ ಪ್ರಚಾರ ನಡೆದಿದೆ. ಜನರ ಬಳಿಗೆ ಹೋಗಿ ಮತಯಾಚನೆ ಮಾಡುತ್ತಿದ್ದೇವೆ. ಜನ ಉತ್ತಮ ರೀತಿಯಲ್ಲಿ ಸ್ಪಂದನೆ ಮಾಡುತ್ತಿದ್ದಾರೆ. ಗ್ರಾಮ ಪಂಚಾಯತ್, ತಾಲೂಕಾ ಪಂಚಾಯತ್, ಜಿಲ್ಲಾ ಪಂಚಾಯತ್ ಹಂತದಲ್ಲಿ ಪ್ರಚಾರ ಕಾರ್ಯ ನಡೆದಿದೆ. ವಾತಾವರಣ ಸರಿಯಾಗಿದೆ. ಮೋದಿ ಪರ ಅಲೆ ಇದೆ. ಗೆಲುವು ನಿಶ್ಚಿತ.
> –ಉಮೇಶ್ ಜಾಧವ, ಸಂಸದ

ಕ್ಷೇತ್ರದ ಮತದಾರರಿಗೆ ಏನೂ ಹೇಳಲು ಬಯಸುತ್ತೀರಿ?

ಕಲಬುರಗಿಯಲ್ಲಿಯೇ ಹುಟ್ಟಿ ಬೆಳೆದವನು. 24x7 ಸಮಯ ಜನರಿಗೆ ಸ್ಪಂದನೆ ಮಾಡುತ್ತೇನೆ. ಮೋದಿ ಅವರು ಪ್ರಧಾನಿ ಆಗುವ ಪಕ್ಷದ ಅಭ್ಯರ್ಥಿಯಾಗಿದ್ದೇನೆ. ದೇಶದ ಭವಿಷ್ಯ ಹಾಗೂ ಸುರಕ್ಷಿತೆಗಾಗಿ ಜಿಲ್ಲೆಯ ಜನರು ಮತ್ತೊಮ್ಮೆ ನನಗೆ ಮತ ಹಾಕಿ ಗೆಲ್ಲಿಸುವ ಮೂಲಕ ಪ್ರಧಾನಿ ಮೋದಿ ಅವರ ಕೈ ಬಲಪಡಿಸಬೇಕು ಎಂದು ಜನರಲ್ಲಿ ಕೈಜೋಡಿಸಿ ಕೇಳುತ್ತೇನೆ.

ನೆಹರೂ ಮೈದಾನದಲ್ಲಿ ನಡೆದ ಕಾರ್ಯಕರ್ತರ ಸಮಾವೇಶದಲ್ಲಿ ಅಮಿತ್ ಶಾ ಗುಡುಗು

28 ಸ್ಥಾನ ಗೆಲ್ಲುವ ಮೂಲಕ ಕಾಂಗ್ರೆಸ್‌ಗೆ ಪಾಠ ಕಲಿಸಿ

ಹುಬ್ಬಳ್ಳಿ: ಪ್ರಧಾನಿ ನರೇಂದ್ರ ಮೋದಿ ಅವರನ್ನು 3 ನೇ ಬಾರಿಗೆ ಪ್ರಧಾನಿ ಮಾಡಲು, ಕರ್ನಾಟಕ ರಾಜ್ಯದಲ್ಲಿ 28 ಸ್ಥಾನ ಬಿಜೆಪಿ ಗೆಲ್ಲುವ ಮೂಲಕ ಕಾಂಗ್ರೆಸ್‌ಗೆ ಪಾಠ ಕಲಿಸಿ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದರು.

ನೆಹರೂ ಮೈದಾನದಲ್ಲಿ ಬೃಹತ್ ಕಾರ್ಯಕರ್ತರ ಸಮಾವೇಶದಲ್ಲಿ ಬಿಜೆಪಿ ಅಭ್ಯರ್ಥಿ ಹಾಗೂ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಅವರ ಗೆಲುವಿಗಾಗಿ ಆಗಮಿಸಿದ್ದ ಅಮಿತ್ ಶಾ ಪ್ರಚಾರ ಸಭೆಯಲ್ಲಿ ಮಾತನಾಡಿ, 2024 ರ ಚುನಾವಣೆ ಬಹಳ ಮಹತ್ವದ ಚುನಾವಣೆ ಆಗಿದೆ. 12 ಲಕ್ಷ ಕೋಟಿ ಹಗರಣ ಮಾಡಿರುವ ಕಾಂಗ್ರೆಸ್ ಪಕ್ಷ ಹಾಗೂ 25 ಪೈಸೆ ಆರೋಪ ಇಲ್ಲದ ನರೇಂದ್ರ ಮೋದಿ ಅವರ ಚುನಾವಣೆ ಆಗಿದೆ. ಬಿಸಿಲು ಜಾಸ್ತಿ ಇದ್ದರೆ ಹೋರದೇಶಕ್ಕೆ ಹೋಗುವ ಅಕ್ಕ- ತಮ್ಮ ಒಂದೆಡೆಯಾದ್ರೆ, ವಿದೇಶದಲ್ಲಿ ಅಭಿವೃದ್ಧಿ ಪಥದತ್ತ ಒಂದು ದಿನವೂ ರಜೆ ತೆಗೆದುಕೊಳ್ಳದೇ, ಗುಡ್ಡಗಾಡು ಪ್ರದೇಶದಲ್ಲಿ ಸೈನಿಕರೊಂದಿಗೆ ದೀಪಾವಳಿ ಆಚರಿಸುವ ನರೇಂದ್ರ ಮೋದಿ ಅವರ ಚುನಾವಣೆ ಆಗಿದೆ ಎಂದರು.

ಕಾಂಗ್ರೆಸ್‌ಅಧಿಕಾರದಲ್ಲಿದ್ದಾಗ, ಭಯೋತ್ಪಾದನೆ ಹೆಚ್ಚಿತ್ತು, ಪಾಕಿಸ್ತಾನ ಪದೇ ಪದೇ ಖ್ಯಾತೆ ತೆಗೆಯುತ್ತಿತ್ತು. ಆಲಿಯಾ, ಮಾಲಿಯಾ, ಜಾಮಾಲಿಯಾ, ಸೇರಿದಂತೆ ಮೌನಿ ಬಾಬಾ ಮೌನವಾಗಿದ್ದರು. ಆದರೆ ಮೋದಿ ಅವರು ಪ್ರಧಾನಿಯಾದ ಮೇಲೆ, ಪಾಕಿಸ್ತಾನಕ್ಕೆ ನಡುಕ ಹುಟ್ಟಿದ್ದು, ಕಾಶ್ಮೀರದಲ್ಲಿ 370 ನೇ ವಿಧಿ ಹಾಗೂ ಸರ್ಜಿಕಲ್ ಸ್ಟ್ರೈಕ್ ಮೂಲಕ ಉತ್ತರ ಕೊಡಲಾಗಿದೆ. ನಕ್ಸಲವಾದ, ಭಯೋತ್ಪಾದನೆ, ನಿರ್ಮೂಲನೆ ಆಗಲು, ಆರ್ಥಿಕತೆ ಹೆಚ್ಚಲು ಮೋದಿ ಅವರಿಗೆ ಗೆಲ್ಲಿಸಿ ಎಂದು ಮನವಿ ಮಾಡಿದರು.

ಹುಬ್ಬಳ್ಳಿಯಲ್ಲಿ ತಿರಂಗಾ ಹೋರಾಟದ ಮೂಲಕ ಜೋಶಿ ಅವರು ರಾಜಕೀಯ ಶುರುವಾಗಿದೆ. ಅಭಿವೃದ್ಧಿ ಪಥದಲ್ಲಿ ಇರುವ ಸಂಸದ ಪ್ರಲ್ಹಾದ್ ಜೋಶಿ ಅವರನ್ನು ಮತ್ತೊಮ್ಮೆ ಆಯ್ಕೆ ಮಾಡಿ ಕಳಿಸಿದರೆ, ಅವರಿಗೆ ಮತ್ತಷ್ಟು ದೊಡ್ಡ ಸ್ಥಾನವನ್ನು ನಾವು ಕೊಡುತ್ತೇವೆ. ಇಂತಹ ಅಭಿವೃದ್ಧಿ ಪಥದ ಸಂಸದನನ್ನು ನೀವು ಎಂದಿಗೂ ಕೆಳೆದುಕೊಳ್ಳಬೇಡಿ ಎಂದರು.

ದೇಶಾದ್ಯಂತ ಎಲ್ಲಾ ಕಡೆಗಳಲ್ಲಿ ಮೋದಿ ಮೋದಿ ಅಲೆಯಿದೆ. ಈಬಾರಿ ಲೋಕಸಭೆಯಲ್ಲಿ 400ರ ಗಡಿ ದಾಟಲು ಎಲ್ಲರೂ ಶ್ರಮವಹಿಸಬೇಕಿದೆ ಎಂದರು.

ರಾಣೆಬೆನ್ನೂರಿನಲ್ಲಿ ಹಾವೇರಿ – ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಪರ ಕೇಂದ್ರ ಗೃಹ ಸಚಿವ ಅಮಿತ್ ಶಾ ಬೃಹತ್ ರೋಡ್ ಶೋ ನಡೆಸಿದರು

ಕೇಂದ್ರಕ್ಕೆ ಬಸವರಾಜ ಬೊಮ್ಮಾಯಿ ಕಳುಹಿಸಿಕೊಡಿ

ಹಾವೇರಿ: ದೇಶಕ್ಕೆ ಬಸವರಾಜ ಬೊಮ್ಮಾಯಿಯವರ ಸೇವೆ ಅವಶ್ಯಕತೆ ಇದೆದೇ, ಬೊಮ್ಮಾಯಿಯವರನ್ನು ಗೆಲ್ಲಿಸಿ ಕೇಂದ್ರಕ್ಕೆ ಕಳುಹಿಸಿ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಮತದಾರರಲ್ಲಿ ಮನವಿ ಮಾಡಿದರು. ಅವರು ರಾಣೆಬೆನ್ನೂರಿನಲ್ಲಿ ಹಾವೇರಿ - ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಪರ ಪ್ರಚಾರಕ್ಕೆ ಬೃಹತ್ ರೋಡ್ ಶೋ ನಡೆಸಿ ನೆರೆದಿದ್ದ ಜನಸ್ತೋಮವನ್ನು ಉದ್ದೇಶಿಸಿ ಮಾತನಾಡಿ, ಇಷ್ಟು ದೊಡ್ಡ ಸಂಖ್ಯೆಯಲ್ಲಿ ನೀವು ಸೇರಿದ್ದಕ್ಕೆ ಧನ್ಯವ